# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 568 |
| ಸದಸ್ಯರ ಹೆಸರು | : | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. (ಕಾಲಾವಕಾಶ ಪಡೆಯಲಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಮಟ್ಟದಲ್ಲಿ ದಿವ್ಯಾಂಗರುಗಳಿಗೆ ನೀಡಲಾಗುತ್ತಿರುವ ಸವಲತ್ತುಗಳೇನು; ಆರ್.ಪಿ.ಡಿ. ಆಕ್ಟ್-2016ರ ಪ್ರಕಾರ ಬಜೆಟ್‌ನ ಶೇ. 5 ರಷ್ಟು ಅನುದಾನವನ್ನು ಪೂರ್ಣವಾಗಿ ಬಳಸಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಯಾವ ಯಾವ ಕೆಲಸ ಕಾಮಗಾರಿಗಳಿಗೆ ಒದಗಿಸಲಾಗಿದೆ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು) | ಗ್ರಾಮ ಪಂಚಾಯತಿ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಸರ್ಕಾರದಿಂದ ನೀಡಲಾಗುವ ಅನುದಾನಗಳು ಮತ್ತು ಸ್ವಂತ ಸಂಪನ್ಮೂಲದಲ್ಲಿ ಶೇಕಡಾ 5 ರಷ್ಟು ಅನುದಾನವನ್ನು ವಿಶೇಷ ಚೇತನರಿಗೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಕಾಯ್ದಿರಿಸಿ, ಅನುಷ್ಠಾನಗೊಳಿಸಲಾಗುತ್ತಿದೆ.<br><br>ಕಳೆದ 3 ವರ್ಷಗಳಲ್ಲಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳು ಸರ್ಕಾರದ ಅನುದಾನ ಮತ್ತು ತಮ್ಮ ನಿಧಿಗಳಲ್ಲಿ ಮೀಸಲಿಟ್ಟ ಶೇಕಡಾ 5 ರ ಅನುದಾನದಲ್ಲಿ ಕೈಗೊಂಡ ಕಾಮಗಾರಿ / ಚಟುವಟಿಕೆಗಳ ಜಿಲ್ಲಾವಾರು ವಿವರಗಳನ್ನು ನಿಗಧಿತ ನಮೂನೆಗಳಲ್ಲಿ ಸಿ.ಡಿ. ಮೂಲಕ ನೀಡಲಾಗಿದೆ. |
| (ಆ) | ರಾಜ್ಯ ಮತ್ತು ಕೇದ್ರ ಸರ್ಕಾರಗಳಿಂದ ಅಂಗವಿಕಲರುಗಳಿಗೆ ಸಿಗುವ ಸವಲತ್ತುಗಳ ಬಗ್ಗೆ ಗ್ರಾಮ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಮಟ್ಟದಲ್ಲಿ ಪ್ರಚಾರ ನಡೆಸಲು ಸರ್ಕಾರದ ಯಾವುದಾರೂ ಆದೇಶಗಳು ಇದೆಯೇ; ಹಾಗಿದ್ದಲ್ಲಿ ಅದರ ಪ್ರತಿಯನ್ನು ಒದಗಿಸುವುದು; | ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಮಟ್ಟದಲ್ಲಿ ವಿಶೇಷ ಚೇತನರಿಗೆ ಸಿಗುವ ಸೌಲಭ್ಯಗಳ ಕುರಿತು ಪ್ರಚಾರ ಮಾಡುವುದು ಆಯಾ ಸ್ಥಳೀಯ ಪ್ರಾಧಿಕಾರಗಳ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಸರ್ಕಾರದಿಂದ ಯಾವುದೇ ಆದೇಶ ಹೊರಡಿಸಿರುವುದಿಲ್ಲ. |
| (ಇ) | ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಅಂಗವಿಕಲರುಗಳಿಗೆ ಸಿಗುವ ಸವಲತ್ತುಗಳ ಬಗ್ಗೆ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯತಿಗಳ ಆವರಣಗಳಲ್ಲಿ ನಾಮ ಫಲಕಗಳನ್ನು ಅಳವಡಿಸಲು ಇರುವ ತೊಂದರೆಗಳೇನು; ಈ ಬಗ್ಗೆ ಸೂಚನಾ ಫಲಕಗಳನ್ನು ಅಳವಡಿಸಲು ಆದೇಶವನ್ನು ಹೊರಡಿಸಲಾಗಿದೆಯೇ; ಈ ಸವಲತ್ತುಗಳ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆಯೇ? (ಮಾಹಿತಿಯೊಂದಿಗೆ ವಿವರಗಳನ್ನು ಒದಗಿಸುವುದು) | ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಅಂಗವಿಕಲರಿಗೆ ಸಿಗುವ ಸವಲತ್ತುಗಳ ಬಗ್ಗೆ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಆವರಣಗಳಲ್ಲಿ ನಾಮ / ಸೂಚನಾ ಫಲಕಗಳನ್ನು ಅಳವಡಿಸಿಕೊಂಡು ಮಾಹಿತಿ ಒದಗಿಸುವುದು ಆಯಾ ಸ್ಥಳೀಯ ಪ್ರಾಧಿಕಾರಗಳ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಸರ್ಕಾರದಿಂದ ಯಾವುದೇ ಆದೇಶ ಹೊರಡಿಸಿರುವುದಿಲ್ಲ. |

ಸಂಖ್ಯೆ: ಗ್ರಾಅಪ 667 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.